Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

04.11.2026 / 18.40 hrs

ಮುಖ್ಯಾಂಶಗಳು

- ಬೆಂಗಳೂರು ಕೌಶಲ್ಯ ಶೃಂಗಸಭೆ ೨೦೨೬ ಉದ್ಘಾಟಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ - ರಾಜ್ಯದ ಪ್ರತಿಭೆಗಳು ಉದ್ಯಮಿಗಳಾಗುವಂತೆ ಕರೆ
- ಕೆಎಸ್ಆರ್‌ಟಿಸಿ, ಬಿಎಂಟಿಸಿ ಬಸ್ ದರ ಹೆಚ್ಚಳ ; ಇಂದು ಮಧ್ಯ ರಾತ್ರಿಯಿಂದಲೇ ನೂತನ ದರ ಜಾರಿ
- ಬಸ್ ದರ ಏರಿಕೆ ಮೂಲಕ ಬಡ ಜನರ ಮೇಲೆ ಗದಾ ಪ್ರಹಾರ ; ಸರ್ಕಾರದ ನಡೆಗೆ ಬಿಜೆಪಿ ಆಕ್ಷೇಪ
- ಸರ್ಕಾರದಿಂದ ಒಂದು ಸಾವಿರ ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳ ಜೊತೆ ಜೋಡಿಸುವ ಗುರಿ
- ಸಕ್ಕರೆ ಕಾರ್ಖಾನೆ ಮಾಲೀಕರು ಕಬ್ಬು ಬೆಳೆಗಾರರ ಸಭೆ ವಿಫಲ ; ಬೆಳಗಾವಿಯಲ್ಲಿ ಮುಂದುವರಿದ ರೈತರ ಪ್ರತಿಭಟನೆ

ಬೆಂಗಳೂರಿನಲ್ಲಿ ನಡೆದ ಸ್ಕೇಲ್, ಸಿಸ್ಟಮ್ಸ್, ಸಿನರ್ಜಿ ಎಂಬ ವಿಷಯದ ಮೇಲೆ ನಡೆದ ಬೆಂಗಳೂರು ಕೌಶಲ್ಯ ಶೃಂಗಸಭೆ ೨೦೨೬ರ ಎರಡನೇ ಆವೃತ್ತಿಯ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು ಕರ್ನಾಟಕದ ಕೌಶಲ್ಯ ಅಭಿವೃದ್ಧಿ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಮತ್ತು ಉದ್ಯೋಗ ಮತ್ತು ಉದ್ಯಮಶೀಲತೆಗೆ ಹೊಸ ಮಾರ್ಗಗಳನ್ನು ರಚಿಸಲು ಈ ಶೃಂಗಸಭೆಯು ಸರ್ಕಾರ, ಕೈಗಾರಿಕೆ, ಶೈಕ್ಷಣಿಕ ಮತ್ತು ಜಾಗತಿಕ ಪಾಲುದಾರರನ್ನು ಒಟ್ಟುಗೂಡಿಸಲಿದೆ ಎಂದು ತಿಳಿಸಿದ್ದಾರೆ.

ರಾಜ್ಯವು ಅಪಾರ ಪ್ರತಿಭೆಗಳನ್ನು ಹೊಂದಿದ್ದು ಯುವಕರನ್ನು ಉದ್ಯೋಗಾಕಾಂಕ್ಷಿಗಳಾಗಲು ಸಿದ್ಧಪಡಿಸುವುದನ್ನು ಮೀರಿದ್ದೆ ಅವರು ಉದ್ಯೋಗ ಸೃಷ್ಟಿಕರ್ತರು, ನಾವೀನ್ಯಕಾರರು ಹಾಗೂ ಉದ್ಯಮಿಗಳಾಗಬೇಕೆಂದು ಕರೆ ನೀಡಿದ್ದಾರೆ.

ಇದೇ ವೇಳೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಅಭಿವೃದ್ಧಿಪಡಿಸಿದ ಏಕೀಕೃತ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗ ಪೋರ್ಟಲ್ ಯುವ ಉದ್ಯೋಗ ಸೇತುವನ್ನು ಉದ್ಘಾಟಿಸಿದರು. ವರ್ಲ್ಡ್ ಸ್ಕಿಲ್ಸ್ ಶಾಂಘೈ ೨೦೨೬ ರಲ್ಲಿ ಭಾರತವನ್ನು ಪ್ರತಿನಿಧಿಸಿದ ರಾಜ್ಯದ ಪ್ರತಿಭೆಗಳನ್ನು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಆರ್. ಪಾಟೀಲ್, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಹಾಲು, ಮೊಸರಿನ ಬೆಲೆ ಏರಿಕೆ ಬೆನ್ನಲ್ಲೇ ರಾಜ್ಯ ಸರ್ಕಾರ ಬಸ್ ದರ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ. ಕೆಎಸ್ಆರ್‌ಟಿಸಿ ಬಸ್ ದರ ಗರಿಷ್ಠ ೯ ರೂಪಾಯಿ ಏರಿಕೆಯಾಗಿದೆ. ಬಿಎಂಟಿಸಿ ಬಸ್ ದರ ಪ್ರತಿ ಸ್ಟೇಜ್‌ಗೆ ೬ ರೂಪಾಯಿಂದ ೧೦ ರೂಪಾಯಿವರೆಗೆ ಹೆಚ್ಚಳವಾಗಿದೆ. ಇಂದು ಮಧ್ಯರಾತ್ರಿಯಿಂದಲೇ ನೂತನ ದರ ಜಾರಿಗೆ ಬರಲಿದೆ.

ಕೆಎಸ್ಆರ್‌ಟಿಸಿ ಎಕ್ಸ್‌ಪ್ರೆಸ್ ಬಸ್‌ಗಳ ದರ ೮೧ ರೂಪಾಯಿ ಯಿಂದ ೧೦೦ ರೂಪಾಯಿಗೆ ಏರಿಕೆಯಾಗಲಿದೆ. ಬಿಎಂಟಿಸಿ ಬಸ್ ಪ್ರಯಾಣ ದರದಲ್ಲಿ ೪ ರೂಪಾಯಿಗಳಷ್ಟು ಹೆಚ್ಚಳವಾಗಲಿದೆ.

ಸಾಮಾನ್ಯ ಬಸ್ ಸೇವೆಯಲ್ಲಿ ೬ ಕಿಲೋಮೀಟರ್ ವರೆಗಿನ ಪ್ರಯಾಣಕ್ಕೆ ಶೇಕಡ ೫ರಷ್ಟು ಹಾಗೂ ೬ ಕಿಲೋಮೀಟರ್ ನಿಂದ ೧೪ ಕಿಲೋಮೀಟರ್‌ವರೆಗಿನ ಪ್ರಯಾಣಕ್ಕೆ ೧೦ ರೂಪಾಯಿ ಹೆಚ್ಚಳ ಮಾಡಲಾಗಿದೆ. ದೂರದ ಪ್ರಯಾಣಕ್ಕೆ ಗರಿಷ್ಠ ಪ್ರಯಾಣ ದರ ೧೫ ರೂಪಾಯಿ ಏರಿಕೆಯಾಗಿದೆ.

ಬೆಂಗಳೂರಿನಿಂದ ಮೈಸೂರಿಗೆ ತೆರಳುವ ವೇಗದೂತ ಸಾರಿಗೆಗೆ ೧೬೦ ರೂಪಾಯಿ ಯಿಂದ ೧೯೭ ರೂಪಾಯಿ ಹಾಗೂ ತುಮಕೂರಿಗೆ ೧೯ ರೂಪಾಯಿ, ಹಾಸನಕ್ಕೆ ೫೧ ರೂಪಾಯಿ ಏರಿಕೆ ಮಾಡಲಾಗಿದೆ. ಬೆಂಗಳೂರಿನಿಂದ ಮಂಗಳೂರಿಗೆ ತೆರಳುವ ವೇಗದೂತ ಸಾರಿಗೆಗೆ ೯೮ ರೂಪಾಯಿ, ಶಿವಮೊಗ್ಗಗೆ ೭೯ ರೂಪಾಯಿ, ಹುಬ್ಬಳ್ಳಿಗೆ ೧೨೩ ರೂಪಾಯಿ, ದಾವಣಗೆರೆಗೆ ೭೩, ಕಲಬುರಗಿ ಗೆ ೧೭೪ ರೂಪಾಯಿ ಏರಿಕೆಯಾಗಿದೆ.

ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಇಳಿಸಿದರೆ, ರಾಜ್ಯದಲ್ಲಿ ಬಸ್ ಪ್ರಯಾಣ ದರ ಕಡಿಮೆ ಮಾಡಲು ಸಿದ್ಧ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡೀಸೆಲ್, ಪೆಟ್ರೋಲ್ ಬೆಲೆ ಹೆಚ್ಚಾದಾಗ ಪ್ರತಿಪಕ್ಷಗಳ ಮೌನವನ್ನು ಪ್ರಶ್ನಿಸಿದ್ದಾರೆ.

ಇದೇ ವೇಳೆ ಹಾಲಿನ ದರ ಏರಿಕೆ ಬಗ್ಗೆ ಸ್ಪಷ್ಟನೆ ನೀಡಿರುವ ಅವರು, ಹಾಲಿನ ದರದಲ್ಲಿ ವ್ಯತ್ಯಾಸವಾಗಲು ಅದರ ಗುಣಮಟ್ಟ ಹಾಗೂ ಕೊಬ್ಬಿನ ಅಂಶ ಕಾರಣ ಎಂದು ಸಮರ್ಥಿಸಿಕೊಂಡಿದ್ದಾರೆ.

ಸಾಮಾನ್ಯ ಹಾಲು, ನಾಟಿ ಹಸುವಿನ ಹಾಲು ಹಾಗೂ ಎಮ್ಮೆ ಹಾಲು ಬೇರೆ ಬೇರೆಯಾಗಿದ್ದು, ಅವುಗಳ ಕೊಬ್ಬಿನ ಅಂಶವು ವಿಭಿನ್ನವಾಗಿದ್ದು, ಈ ವ್ಯತ್ಯಾಸಗಳನ್ನು ಜನರು ಅರ್ಥ ಮಾಡಿಕೊಳ್ಳಬೇಕೆಂದು ತಿಳಿಸಿದ್ದಾರೆ.

ಇದೇ ವೇಳೆ ಮೈಸೂರಿನ ರಾಜಮನೆತನದ ಬಗ್ಗೆ ಸರ್ಕಾರಕ್ಕೆ ಅಪಾರ ಗೌರವವಿದೆ ಎಂದು ಹೇಳಿದ್ದಾರೆ.

ಹಾಲು, ಮೊಸರು, ವಿದ್ಯುತ್ ದರಗಳನ್ನು ಏರಿಸಿರುವ ರಾಜ್ಯ ಸರ್ಕಾರ ಬಸ್ ದರವನ್ನು ಏರಿಸುವ ಮೂಲಕ ಬಡಜನರ ಮೇಲೆ ಗದಾ ಪ್ರಹಾರ ಮಾಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಟಿಕೆಟ್ ದರವನ್ನು ಕನಿಷ್ಠ ಶೇಕಡ ೬೭ರಷ್ಟು ಏರಿಕೆ ಮಾಡಲಾಗಿದೆ. ಇದರಿಂದ ದುಡಿಯಲು ತೆರಳುವ ಕಾರ್ಮಿಕ ಹಾಗೂ ಬಡ ರೋಗಿಗಳು, ಜನ ಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಸರ್ಕಾರದ ಕೆಟ್ಟ ಆರ್ಥಿಕ ನಿರ್ವಹಣೆಗೆ ಬೆಲೆ ತೆರಬೇಕೇ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಒಂದೆಡೆ ಗ್ಯಾರಂಟಿಗಳನ್ನು ನೀಡಿ, ಮತ್ತೊಂದೆಡೆ ಬೆಲೆ ಏರಿಕೆಯ ಮೂಲಕ ಜನರ ಜೇಬು ದೋಚುವುದೇ ಸರ್ಕಾರದ ಆಡಳಿತ ಮಂತ್ರ ಎಂದು ವ್ಯಂಗ್ಯವಾಡಿದ್ದಾರೆ.

ರಾಜ್ಯ ಸರ್ಕಾರ ಮನ ಬಂದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದಲ್ಲದೆ ಈಗ ಸರ್ಕಾರಿ ಬಸ್ ದರ ಏರಿಕೆ ಮಾಡಿ ಜನ ವಿರೋದಿ ಸರ್ಕಾರ ಎಂಬುದನ್ನು ಸಾಬೀತು ಪಡಿಸಿದೆ ಎಂದು ಪರಿಷತ್ ಸದಸ್ಯ ಸಿ.ಟಿರವಿ ತಿಳಿಸಿದ್ದಾರೆ.

ಸರ್ಕಾರ ಸಿಎಸ್ಆರ್ ಹೊಸ ನೀತಿ ಜಾರಿಗೆ ತಂದಿದ್ದು, ರಾಜ್ಯದ ಎಲ್ಲಾ ಖಾಸಗಿ ಶಾಲೆಯ ಆಡಳಿತ ಮಂಡಳಿಗಳು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ದತ್ತು ಪಡೆಯಲು ಅಥವಾ ಅವುಗಳ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸಾಮಾಜಿಕ, ಸಾಂಸ್ಥಿಕ, ಹೊಣೆಗಾರಿಕಾ ಪ್ರತಿನಿಧಿಗಳ ಸಭೆಯಲ್ಲಿ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒಂದು ಸಾವಿರ ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳ ಜೊತೆ ಜೋಡಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಡಿ.ಕೆ.ಶಿವಕುಮಾರ್

ಇದೇ ವೇಳೆ ಮಾತನಾಡಿದ, ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಶಿಕ್ಷಣವೆಂಬುದು ಕೇವಲ ಒಂದು ಮಗುವಿನ ಭವಿಷ್ಯವನ್ನು ರೂಪಿಸುವ ಸಾಧನವಲ್ಲ, ಅದು ಇಡೀ ಸಮಾಜ ಮತ್ತು ದೇಶದ ಭವಿಷ್ಯವನ್ನು ನಿರ್ಧರಿಸುವ ಶಕ್ತಿಯಾಗಿದೆ ಎಂದು ಹೇಳಿದ್ದಾರೆ.

ಮುಂದಿನ ಶೈಕ್ಷಣಿಕ ವರ್ಷದೊಳಗೆ ೧೮ ಸಾವಿರ ಸರ್ಕಾರಿ ಶಾಲಾ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಕಬ್ಬಿನ ಬೆಲೆ ನಿಗದಿ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ಕಳೆದ ಎರಡು ದಿನಗಳಿಂದ ಕಬ್ಬು ಬೆಳೆಗಾರರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರ ಮಧ್ಯೆ ನಡೆದಿರುವ ಮಾತುಕತೆ ಇನ್ನೂ ಕೊನೆಗೊಳ್ಳದ ಕಾರಣ ರೈತರು ಪ್ರತಿಭಟನೆ ಮುಂದುವರಿಸಿದ್ದಾರೆ.

ಸಕ್ಕರೆ ಕಾರ್ಖಾನೆ ಮಾಲೀಕರೂ ಆದ ಸಚಿವ ಸತೀಶ್ ಜಾರಕಿಹೊಳಿ ಅವರೊಂದಿಗೆ ನಡೆದ ಮಾತುಕತೆಯಲ್ಲಿ ಕಾರ್ಖಾನೆ ಸೂಚಿಸುವ ಬೆಲೆಗೆ ರೈತರ ಒಪ್ಪಿಗೆ ದೊರೆಯದ ಕಾರಣ, ಮತ್ತೇ ಜೈಲ್ ಭರೋ ಚಳವಳಿ ಮುಂದುವರಿಸಿದ್ದಾರೆ. ಹುಕ್ಕೇರಿ ತಾಲೂಕಿನ ಬಡಕುಂದ್ರಿ ದೇವಸ್ಥಾನದಿಂದ ಬೆಳಗಾವಿ ಹಿಂಡಲಗಾದತ್ತ ಕಬ್ಬು ಬೆಳೆಗಾರರು ಪ್ರಯಾಣ ಬೆಳೆಸಿದ್ದಾರೆ.

ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗ, ಇವಿಎಂ ಯಂತ್ರಗಳು ಹಾಗೂ ಸುಪ್ರೀಂ ಕೋರ್ಟ್ ನಂತಹ ದೇಶದ ಸಾಂವಿಧಾನಿಕ ಸಂಸ್ಥೆಗಳನ್ನು ನಿರಂತರವಾಗಿ ಅಪಮಾನಿಸುತ್ತಿದೆ ಎಂದು ಬಿಜೆಪಿ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಆರೋಪಿಸಿದ್ದಾರೆ.

ಚಿತ್ರದುರ್ಗದಲ್ಲಿ ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ ಜಾಗೃತಿ ಪಾದಯಾತ್ರೆ ಹಾಗೂ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ಹಾಲಿನ ದರ ಹಾಗೂ ಬಸ್ ಪ್ರಯಾಣ ದರ ಹೆಚ್ಚಿಸಿ ಜನವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

೨೦೨೯ರಲ್ಲಿ ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸಂಸದ ಗೋವಿಂದ ಕಾರಜೋಳ, ವಿಧಾನಪರಿಷತ್ ವಿಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಸಂಕ್ಷಿಪ್ತ ಸುದ್ದಿಗಳು-೧

- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಕೆಂಪೇಗೌಡ ಸ್ಮಾರಕ, ಮೆಟ್ರೋ ರೂಪುರೇಷೆ, ವಿಜಯಪುರ, ದೇವನಹಳ್ಳಿಗೆ ಕಾವೇರಿ ನೀರು ತರುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಜೊತೆಗೆ ಚರ್ಚಿಸಲಾಗಿದೆ, ಶೀಘ್ರವೇ ಮುಖ್ಯಮಂತ್ರಿಗಳನ್ನು ಕರೆಸಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ.
- ಚಳಿಗಾಲದ ಅಧಿವೇಶನದ ಯಶಸ್ವಿಗಾಗಿ ರಚಿಸಲಾದ ವಿವಿಧ ಸಮಿತಿಗಳು, ಉಪ ಸಮಿತಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವುದರ ಮೂಲಕ ಅಧಿವೇಶನ ಯಶಸ್ವಿಗೊಳಿಸುವಂತೆ ಬೆಳಗಾವಿ ಪ್ರಭಾರ ಜಿಲ್ಲಾಧಿಕಾರಿ ರಾಹುಲ್ ಶಿಂಧೆ ತಿಳಿಸಿದ್ದಾರೆ.
- ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಕೋಲಾರ ಜಿಲ್ಲೆಗೆ ಭೇಟಿ ನೀಡದಿರುವುದನ್ನು ಖಂಡಿಸಿ ಪ್ರೊಫೆಸರ್ ನಂಜುಂಡಸ್ವಾಮಿ ಸ್ಥಾಪಿತ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೋಲಾರದಲ್ಲಿ ವಿಶಿಷ್ಟ ರೀತಿಯ ಪ್ರತಿಭಟನೆ ನಡೆಸಿತು.

ಇನ್ನು ಹವಾವರ್ತಮಾನ,

ಮುರಸು ಚಂಡಮಾರುತದ ಪರಿಣಾಮ ಬೆಂಗಳೂರು, ಕರಾವಳಿ ಜಿಲ್ಲೆಗಳು ಸೇರಿದಂತೆ ರಾಜ್ಯದ ಹಲವೆಡೆ ಇಂದು ಮಳೆಯಾಗಿದೆ.

ಮುಂದಿನ ಮೂರು ದಿನಗಳ ಕಾಲ ಬೆಂಗಳೂರು, ಕರಾವಳಿ ಮತ್ತು ದಕ್ಷಿಣ ಕರ್ನಾಟಕದ ಕೆಲವೆಡೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಒಂದೆರಡು ಕಡೆಗಳಲ್ಲಿ ಇಂದು ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಚಾಮರಾಜನಗರ, ಕೊಡಗು, ಮೈಸೂರು, ಮಂಡ್ಯ ಜಿಲ್ಲೆಗಳ ಕೆಲವೆಡೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

_____ ಮುಕ್ತಾಯ _____